# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಟಿ.ಎ ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 126 |
| ಉತ್ತರಿಸಬೇಕಾದ ದಿನಾಂಕ | 05.07.2023 |
| ಉತ್ತರಿಸಬೇಕಾದ ಸಚಿವರು | ಮಾನ್ಯ ವಸತಿ, ವಕ್ಫ್, ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಸತಿ ಇಲಾಖೆಯಿಂದ ದೊಡ್ಡ ದೊಡ್ಡ ಸುವ್ಯವಸ್ಥಿತ ವಸತಿ ಸಮುಚ್ಚಯ ನಿರ್ಮಿಸಿ ಮನೆಗಳನ್ನು ವಿತರಿಸುವ ಯೋಜನೆಗೆ ಕಾರ್ಯಯೋಜನೆ ರೂಪಿಸಲಾಗಿದೆಯೇ ; | ಹೌದು.<br>ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) (PMAY-U)ಯ ಎ.ಹೆಚ್.ಪಿ ಘಟಕದಡಿ ರಾಜ್ಯದ ವಿವಿಧ ನಗರಗಳಲ್ಲಿ ವಸತಿ ಸಮುಚ್ಚಯಗಳಲ್ಲಿ ಒಟ್ಟು 2,93,163 ಮನೆಗಳನ್ನು ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ನಿರ್ಮಿಸಲು ಕೇಂದ್ರ ಸರ್ಕಾರದಿಂದ ಅನುಮೋದನೆ ಪಡೆಯಲಾಗಿದೆ. |
| ಆ) | ಹಾಗಿದ್ದಲ್ಲಿ, ಈ ಯೋಜನೆಯ ರೂಪುರೇಷೆಯ ಸಂಪೂರ್ಣ ಮಾಹಿತಿ ನೀಡುವುದು ; | ಪ್ರಧಾನ ಮಂತ್ರಿ ಆವಾಸ್ ಯೋಜನೆ -ಎ.ಹೆಚ್.ಪಿ ಘಟಕದಡಿ ನಿವೇಶನ ರಹಿತ ಹಾಗೂ ವಸತಿ ರಹಿತರ ಕುಟುಂಬಗಳಿಗೆ ವಸತಿ ಸೌಲಭ್ಯವನ್ನು ಒದಗಿಸಲು ಅನುಷ್ಠಾನ ಸಂಸ್ಥೆಗಳಾದ ರಾಜೀವ್ ಗಾಂಧಿ ವಸತಿ ನಿಗಮ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಸರ್ಕಾರದ ಜಮೀನನ್ನು ಗುರುತಿಸಿ ಅಥವಾ ಖಾಸಗಿ ಜಮೀನನ್ನು ಖರೀದಿಸಿ, ಲಭ್ಯವಿರುವ ಜಮೀನಿಗೆ ಅನುಗುಣವಾಗಿ ವಸತಿ ಸಮುಚ್ಚಯ ನಿರ್ಮಾಣ ಕಾರ್ಯ ಕೈಗೊಳ್ಳಲಾಗುತ್ತಿದೆ.<br><br>ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಾಯಧನದೊಂದಿಗೆ ಫಲಾನುಭವಿಗಳ ವಂತಿಕೆ ಹಾಗೂ ಅನುಷ್ಠಾನ ಸಂಸ್ಥೆಗಳ ಪಾಲಿನ ಮೊತ್ತವನ್ನು ಒಗ್ಗೂಡಿಸಿ, ವಿಸ್ತೃತ ಯೋಜನಾ ವರದಿಯನ್ನು ಸಿದ್ದಪಡಿಸಿ, ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಅನುಮೋದನೆ ನೀಡಿದ ನಂತರ ಮನೆಗಳ ನಿರ್ಮಾಣಕ್ಕಾಗಿ ಟೆಂಡರ್ ಆಹ್ವಾನಿಸಿ ಆಯ್ಕೆಯಾದ ಗುತ್ತಿಗೆದಾರರು / ಸಂಸ್ಥೆಗೆ ಮನೆಗಳ ನಿರ್ಮಾಣ ಕಾಮಗಾರಿಯನ್ನು ವಹಿಸಲಾಗುತ್ತದೆ. ಆಯ್ಕೆಯಾದ ಫಲಾನುಭವಿಗಳಿಂದ ಉಳಿತಾಯ ಮೊತ್ತ ಹಾಗೂ ಬ್ಯಾಂಕ್ ಸಾಲ ಸೌಲಭ್ಯ ಕಲ್ಪಿಸುವ ಮೂಲಕ ಫಲಾನುಭವಿ ವಂತಿಕೆ |

| | | |
|---|---|---|
| | | ಸಂಗ್ರಹಿಸಲಾಗುತ್ತದೆ. ಮನೆಗಳ ನಿರ್ಮಾಣ ಪೂರ್ಣಗೊಳಿಸಿ, ಮೂಲಭೂತ ಸೌಕರ್ಯಗಳನ್ನು ಅನುಷ್ಠಾನ ಸಂಸ್ಥೆಯ ಪಾಲಿನ ಮೊತ್ತದಿಂದ ಒದಗಿಸಿ, ಕಾಮಗಾರಿಯನ್ನು ಪೂರ್ಣಗೊಳಿಸಿ ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗುತ್ತದೆ. |
| ಇ) | ವಸತಿ ಸಮುಚ್ಛಯ ನಿರ್ಮಿಸಿ ಮನೆಗಳನ್ನು ವಿತರಿಸುವ ಯೋಜನೆಯ ಅನುಷ್ಠಾನಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? | ಪ್ರಧಾನ ಮಂತ್ರಿ ಆವಾಸ್ ಯೋಜನೆ -ಎ.ಹೆಚ್.ಪಿ ಘಟಕದಡಿ ಅನುಮೋದನೆಗೊಂಡ ಮನೆಗಳನ್ನು ಶೀಘ್ರದಲ್ಲಿ ಪೂರ್ಣಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>1. ನಗರ ಸ್ಥಳೀಯ ಸಂಸ್ಥೆಗೆ ಅನುಮೋದನೆಗೊಂಡ ಯೋಜನೆಗಳಡಿ ನಗರ ಸ್ಥಳೀಯ ಸಂಸ್ಥೆಗಳ ವತಿಯಿಂದ ಟೆಂಡರ್ ಆಹ್ವಾನಿಸುವಲ್ಲಿ ವಿಳಂಬವಾದ ಕಾರಣದಿಂದಾಗಿ ರಾಜೀವ್ ಗಾಂಧಿ ವಸತಿ ನಿಗಮದಿಂದಲೇ ಟೆಂಡರ್ ಆಹ್ವಾನಿಸಿ ಕಾಮಗಾರಿ ಅನುಷ್ಠಾನಗೊಳಿಸಲಾಗುತ್ತಿದೆ.<br>2. ನಗರ ಸ್ಥಳೀಯ ಸಂಸ್ಥೆಯ ಅಧಿಕಾರಿಗಳುಬ / ಜಿಲ್ಲಾ ಮಟ್ಟದ ಅಧಿಕಾರಿಗಳು / ನಿಗಮದ ಅಧಿಕಾರಿಗಳು ಕಾಲಕಾಲಕ್ಕೆ ಯೋಜನಾ ಸ್ಥಳಗಳಿಗೆ ಭೇಟಿ ನೀಡಿ ಪ್ರಗತಿಯನ್ನು ಪರಿಶೀಲಿಸಿ ಕಾಮಗಾರಿಯ ವಿಳಂಬಕ್ಕೆ ಕಾರಣಗಳನ್ನು ಗುರುತಿಸಿ, ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಗುತ್ತಿಗೆದಾರರಿಗೆ ಕಾಮಗಾರಿ ತ್ವರಿತಗೊಳಿಸಲು ನಿಯಮಿತವಾಗಿ ನಿರ್ದೇಶನಗಳನ್ನು ನೀಡಲಾಗುತ್ತಿದೆ.<br>3. ಫಲಾನುಭವಿಗಳಿಂದ ವಂತಿಕೆ ಸಂಗ್ರಹಣೆಗೆ, ಬ್ಯಾಂಕ್ ಸಾಲ ಸೌಲಭ್ಯ ಒದಗಿಸಲು ಎಲ್ಲಾ ಅವಶ್ಯಕ ಕ್ರಮಗಳನ್ನು ಕೂಡ ಕೈಗೊಳ್ಳಲಾಗುತ್ತಿದೆ. ಫಲಾನುಭವಿಗಳ ವಂತಿಕೆಯನ್ನು ಎಸ್.ಸಿ.ಪಿ/ ಟಿ.ಎಸ್.ಪಿ, ಕಾರ್ಮಿಕ ಇಲಾಖೆಯ ಅನುದಾನ, ಜಿಲ್ಲಾ ಗಣಿ ಅನುದಾನ (ಕೆಲವು ಯೋಜನಾ ಸ್ಥಳಗಳಲ್ಲಿ) ಇತ್ಯಾದಿಗಳಿಂದ ಭರಿಸಿ, ಫಲಾನುಭವಿಗಳ ಆರ್ಥಿಕ ಹೊರೆ ಕಡಿಮೆ ಮಾಡಲು ಕ್ರಮ ವಹಿಸಲಾಗುತ್ತಿದೆ.<br>4. ಎಸ್.ಸಿ.ಪಿ/ಟಿ.ಎಸ್.ಪಿ, ನಗರೋತ್ಥಾನ ಯೋಜನೆ 14ನೇ ಹಣಕಾಸು, ಅಮೃತ ಯೋಜನೆ ಇತ್ಯಾದಿ ಯೋಜನೆಗಳೊಂದಿಗೆ ಸಮನ್ವಯ ಸಾಧಿಸಿ ವಸತಿ ಸಮುಚ್ಛಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| | | "ಮುಖ್ಯ ಮಂತ್ರಿಗಳ ಒಂದು ಲಕ್ಷ ಬಹುಮಹಡಿ ವಸತಿ ಯೋಜನೆ"<br>5. ಕಂದಾಯ ಇಲಾಖೆಯೊಂದಿಗೆ ಸಮನ್ವಯತೆ ಸಾಧಿಸಿ, ವಸತಿ ಯೋಗ್ಯ ಜಮೀನುಗಳನ್ನು ಹಸ್ತಾಂತರಿಸಿಕೊಳ್ಳಲಾಗುತ್ತಿದೆ.<br>6. ವಿವಿಧ ಇಲಾಖೆಗಳಿಂದ / ಸಕ್ಷಮ ಪ್ರಾಧಿಕಾರಗಳಿಂದ ವಿವಿಧ ಅನುಮತಿ ಅನುಮೋದನೆ ಪಡೆಯವಲ್ಲಿ ವಿನಾಯತಿ / ರಿಯಾಯತಿ ಪಡೆಯಲಾಗಿದೆ.<br>7. ಯೋಜನೆಗೆ ಒದಗಿಸಿದ ಜಮೀನಿಗೆ ಸಂಬಂಧಿಸಿದ ನ್ಯಾಯಾಲಯದಲ್ಲಿ ದಾಖಲಿಸಿದ ವ್ಯಾಜ್ಯಗಳನ್ನು ಸ್ಥಳೀಯರ ಪ್ರತಿರೋದಗಳನ್ನು ಬಗೆಹರಿಸಲು ಕ್ರಮ ವಹಿಸಲಾಗುತ್ತಿದೆ. ಅಗತ್ಯವಿದ್ದಲ್ಲಿ ಸ್ಥಳಾಂತರಗೊಳಿಸಿ, ಬದಲಿ ಪ್ರದೇಶದಲ್ಲಿ ಮನೆಗಳನ್ನು ನಿರ್ಮಿಸಲಾಗುತ್ತಿದೆ.<br>8. ಫಲಾನುಭವಿಗಳ ಆಯ್ಕೆಗೆ ಆಧ್ಯತೆ ನೀಡಲಾಗುತ್ತಿದೆ ಆನ್ ಲೈನ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. |

ಸಂಖ್ಯೆ: ವಇ 84 ಹೆಚ್‌ಎಫ್‌ಎ 2023]

B. Zameer

**(ಬಿ.ಝಡ್ ಜಮೀರ್ ಅಹಮದ್ ಖಾನ್)**
ವಸತಿ, ವಕ್ಫ್, ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು